# All India Radio: Bangalore
# National Bulletin In Kannada
# 20.03.2025 19.35 p.m.

## ಆಕಾಶವಾಣಿ, ಬೆಂಗಳೂರು
## ರಾಷ್ಟ್ರೀಯ ವಾರ್ತೆಗಳು

**ಮುಖ್ಯಾಂಶಗಳು**

1. **ಕ್ಷೇತ್ರ ವಿಂಗಡಣೆ ಪ್ರಸ್ತಾಪದ ವಿರುದ್ಧ ವಿರೋಧ ಪಕ್ಷಗಳ ಗದ್ದಲ; ಉಭಯ ಸದನಗಳ ಕಲಾಪ ನಾಳೆಗೆ ಮುಂದೂಡಿಕೆ**
2. **ಛತ್ತೀಸ್‌ಗಡದಲ್ಲಿ ನಕ್ಸಲ್ ಕಾರ್ಯಾಚರಣೆ; ಎರಡು ಪ್ರತ್ಯೇಕ ಘಟನೆಗಳಲ್ಲಿ 30 ಮಾವೋವಾದಿಗಳು ಹತ**
3. **ಏಳು ಸಾವಿರ ಕೋಟಿ ರೂಪಾಯಿ ಮೌಲ್ಯದ ದೇಶಿ ನಿರ್ಮಿತ ಎಟಿಎಜಿಎಸ್ ಸ್ವಾಧೀನಕ್ಕೆ ಕೇಂದ್ರ ಸಚಿವ ಸಂಪುಟ ಅನುಮೋದನೆ**
4. **ಚಾರ್‌ಧಾಮ್ ಯಾತ್ರೆಗೆ ಯಾತ್ರಾರ್ಥಿಗಳ ನೋಂದಣಿ ಇಂದಿನಿಂದ ಆರಂಭ**
5. **ಖೇಲೋ ಇಂಡಿಯಾ ಪ್ಯಾರಾ ಕ್ರೀಡಾಕೂಟದ ಎರಡನೇ ಆವೃತ್ತಿಗೆ ಚಾಲನೆ**

******************

ಲೋಕಸಭೆ ಮತ್ತು ವಿಧಾನಸಭಾ ಕ್ಷೇತ್ರಗಳ ಪ್ರಸ್ತಾವಿತ ಕ್ಷೇತ್ರ ವಿಂಗಡಣೆಯ ವಿರುದ್ಧ ಡಿಎಂಕೆ ಮತ್ತು ಇತರೆ ಕೆಲವು ವಿರೋಧ ಪಕ್ಷದ ಸದಸ್ಯರು ಪ್ರತಿಭಟನೆ ನಡೆಸಿದ ನಂತರ ಸಂಸತ್ತಿನ ಎರಡೂ ಸದನಗಳನ್ನು ದಿನದ ಮಟ್ಟಿಗೆ ಮುಂದೂಡಲಾಗಿದೆ.

ಲೋಕಸಭೆಯಲ್ಲಿ, ಎರಡನೇ ಬಾರಿ ಮುಂದೂಡಿಕೆಯ ನಂತರ ಮಧ್ಯಾಹ್ನ 2 ಗಂಟೆಗೆ ಸದನ ಸೇರಿದಾಗ, ಪ್ರಸ್ತಾವಿತ ಕ್ಷೇತ್ರ ವಿಂಗಡಣೆಯನ್ನು ವಿರೋಧಿಸಿ, ಘೋಷಣೆಗಳನ್ನು ಹೊಂದಿರುವ ಟಿ-ಶರ್ಟ್ ಧರಿಸಿ ಡಿಎಂಕೆ ಸಂಸದರು ಹಾಜರಾದರು. ಪ್ರತಿಭಟನಾನಿರತ ಸದಸ್ಯರು ಧರಿಸಿದ್ದ ಉಡುಪಿಗೆ ಸಭಾಧ್ಯಕ್ಷರು ಆಕ್ಷೇಪ ವ್ಯಕ್ತಪಡಿಸಿದರು.

ಕೆಲವು ಸದಸ್ಯರು ಸದನದ ನಿಯಮಗಳು ಮತ್ತು ಘನತೆಯನ್ನು ಹಾಳು ಮಾಡುತ್ತಿದ್ದಾರೆ. ಘೋಷಣೆಗಳನ್ನು ಹೊಂದಿರುವ ಟಿ-ಶರ್ಟ್‌ಗಳನ್ನು ಧರಿಸುವಂತಿಲ್ಲ. ನಿಯಮಗಳ ಉಲ್ಲಂಘನೆಯನ್ನು ಅನುಮತಿಸುವುದಿಲ್ಲ ಎಂದು ಲೋಕಸಭಾಧ್ಯಕ್ಷ ಓಂ ಬಿರ್ಲಾ ಹೇಳಿದರು. ಗದ್ದಲ ಹೆಚ್ಚಾದಾಗ, ಸದನವನ್ನು ದಿನದ ಮಟ್ಟಿಗೆ ಮುಂದೂಡಲಾಯಿತು.

ರಾಜ್ಯಸಭೆಯು ಈ ವಿಷಯದ ಕುರಿತು ನಾಲ್ಕು ಬಾರಿ ಮುಂದೂಡಿಕೆಗೆ ಸಾಕ್ಷಿಯಾಯಿತು. ಮೂರನೇ ಬಾರಿ ಮುಂದೂಡಿಕೆಯ ನಂತರ ಮಧ್ಯಾಹ್ನ 2 ಗಂಟೆಗೆ ಸದನ ಮತ್ತೆ ಸೇರಿದಾಗ, ಡಿಎಂಕೆ ಸಂಸದರು ಘೋಷಣೆಗಳನ್ನು ಹೊಂದಿರುವ ಟಿ-ಶರ್ಟ್‌ಗಳನ್ನು ಧರಿಸಿದ ವಿಷಯದ ಕುರಿತ ಗದ್ದಲದ ನಡುವೆ ಉಪಸಭಾಪತಿ ಹರಿವಂಶ್, ಸದನವನ್ನು ದಿನದ ಮಟ್ಟಿಗೆ ಮುಂದೂಡಿದರು.

******************

ದೇಶದಲ್ಲಿ ನಿರುದ್ಯೋಗ ದರವು 2017-18ರ ಅವಧಿಯಲ್ಲಿ ಶೇಕಡ 6 ರಷ್ಟಿದ್ದು, 2023-24ರಲ್ಲಿ ಶೇಕಡಾ 3.2ಕ್ಕೆ ಇಳಿದಿದೆ ಎಂದು ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಖಾತೆ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ತಿಳಿಸಿದ್ದಾರೆ.

ರಾಜ್ಯಸಭೆಯಲ್ಲಿಂದು ಪ್ರಶ್ನೆಯೊಂದಕ್ಕೆ ಲಿಖಿತ ಉತ್ತರ ನೀಡಿದ ಅವರು, ಉತ್ಪಾದನಾ ವಲಯದಲ್ಲಿ ಉದ್ಯೋಗವು 2021-22 ರಲ್ಲಿ 6.1 ಕೋಟಿಯಿಂದ 20222-23ರಲ್ಲಿ 6.3 ಕೋಟಿಗೆ ಏರಿಕೆಯಾಗಿದೆ. ಇದು ಈ ಅವಧಿಯಲ್ಲಿ 20 ಲಕ್ಷಕ್ಕೂ ಹೆಚ್ಚಿನ ಉದ್ಯೋಗ ಹೆಚ್ಚಳವನ್ನು ಸೂಚಿಸುತ್ತದೆ ಎಂದು ಹೇಳಿದರು.

ಉದ್ಯೋಗ ಸೃಷ್ಟಿ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ಅನೇಕ ಯೋಜನೆಗಳನ್ನು ಜಾರಿಗೊಳಿಸುತ್ತಿದೆ. ಇವುಗಳಲ್ಲಿ ಪ್ರಧಾನಮಂತ್ರಿಗಳ ಉದ್ಯೋಗ ಸೃಷ್ಟಿ ಯೋಜನೆ, ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ, ದೀನ್ ದಯಾಳ ಉಪಾಧ್ಯಾಯ ಗ್ರಾಮೀಣ ಕೌಶಲ್ಯ ಯೋಜನೆ, ಪ್ರಧಾನಮಂತ್ರಿ ಮುದ್ರಾ ಯೋಜನೆ ಮತ್ತು ಸ್ಟಾರ್ಟ್‌ಅಪ್ ಇಂಡಿಯಾ ಒಳಗೊಂಡಿದೆ ಎಂದು ಸಚಿವೆ ಶೋಭಾ ಕರಂದ್ಲಾಜೆ ವಿವರಿಸಿದರು.

******************

ಆಹಾರ ಸಂಸ್ಕರಣಾ ವಲಯಕ್ಕೆ ಸಂಬಂಧಿಸಿದ ವಿವಿಧ ಯೋಜನೆಗಳ ಅಡಿಯಲ್ಲಿ ಕೇಂದ್ರ ಸರ್ಕಾರ ಒಂದು ಸಾವಿರದ 100ಕ್ಕೂ ಹೆಚ್ಚು ಮೂಲಸೌಕರ್ಯ ಯೋಜನೆಗಳನ್ನು ಅನುಮೋದಿಸಿದೆ. ಇದರಿಂದ 5 ಲಕ್ಷಕ್ಕೂ ಹೆಚ್ಚು ರೈತರಿಗೆ ಪ್ರಯೋಜನವಾಗಲಿದೆ ಎಂದು ಕೇಂದ್ರ ಆಹಾರ ಸಂಸ್ಕರಣಾ ಖಾತೆ ರಾಜ್ಯ ಸಚಿವ ರವನೀತ್ ಸಿಂಗ್ ಹೇಳಿದ್ದಾರೆ.

ಲೋಕಸಭೆಯಲ್ಲಿಂದು ಪ್ರಶ್ನೆಯೊಂದಕ್ಕೆ ಲಿಖಿತ ಉತ್ತರ ನೀಡಿದ ಅವರು, ಈ ಯೋಜನೆಗಳಲ್ಲಿ ಪ್ರಧಾನಮಂತ್ರಿ ಕಿಸಾನ್ ಸಂಪದ ಯೋಜನೆ, ಆಹಾರ ಸಂಸ್ಕರಣಾ ಉದ್ಯಮಕ್ಕಾಗಿ ಉತ್ಪಾದನೆಗೆ ಸಂಬಂಧಿಸಿದ ಪ್ರೋತ್ಸಾಹಕ ಯೋಜನೆ ಮತ್ತು ಪ್ರಧಾನಮಂತ್ರಿ ಸೂಕ್ಷ್ಮ ಆಹಾರ ಸಂಸ್ಕರಣಾ ಉದ್ಯಮಗಳ ಯೋಜನೆ ಸೇರಿವೆ ಎಂದರು.

ಇದೇ ವೇಳೆ 46 ಸಾವಿರ ಕೋಟಿ ರೂಪಾಯಿ ವೆಚ್ಚದ 41 ಮೆಗಾ ಆಹಾರ ಪಾರ್ಕ್‌ಗಳಿಗೆ ಸಚಿವಾಲಯ ಅನುಮೋದಿಸಿದೆ ಎಂದು ಅವರು ತಿಳಿಸಿದರು.

*****************

ಪರಿಶಿಷ್ಟ ಪಂಗಡಗಳಲ್ಲಿ ಸಾಕ್ಷರತೆ ಪ್ರಮಾಣ ಹೆಚ್ಚಿಸಲು ಕೇಂದ್ರ ಸರ್ಕಾರ ವಿವಿಧ ಯೋಜನೆಗಳನ್ನು ಜಾರಿಗೊಳಿಸುತ್ತಿದೆ ಎಂದು ಕೇಂದ್ರ ಬುಡಕಟ್ಟು ವ್ಯವಹಾರಗಳ ಸಚಿವ ಜುಯಲ್ ಓರಮ್ ಹೇಳಿದ್ದಾರೆ.

ಲೋಕಸಭೆಯಲ್ಲಿ ಪ್ರಶ್ನೆಯೊಂದಕ್ಕೆ ಲಿಖಿತ ಉತ್ತರ ನೀಡಿದ ಸಚಿವರು, ಪರಿಶಿಷ್ಟ ಪಂಗಡಗಳ ಸಾಕ್ಷರತೆ ಪ್ರಮಾಣವು ಒಟ್ಟಾರೆ ಜನಸಂಖ್ಯೆಗಿಂತ ಕಡಿಮೆ ಇದೆ. ಇತ್ತೀಚಿನ ವರ್ಷಗಳಲ್ಲಿ ಪರಿಶಿಷ್ಟ ಪಂಗಡಗಳ ಸಾಕ್ಷರತೆಯಲ್ಲಿ ಗಮನಾರ್ಹ ಸುಧಾರಣೆ ಕಂಡು ಬಂದಿದೆ ಮತ್ತು ಅಂತರವು ಕ್ರಮೇಣ ಕಡಿಮೆಯಾಗುತ್ತಿದೆ ಎಂದು ತಿಳಿಸಿದರು.

*****************

ಕೇಂದ್ರ ಸರ್ಕಾರ ರೈತರ ಕಲ್ಯಾಣಕ್ಕೆ ಬದ್ಧವಾಗಿದೆ. 2014 ರಿಂದ ರೈತರಿಗಾಗಿ ಹಲವಾರು ಕ್ರಮಗಳನ್ನು ತೆಗೆದುಕೊಂಡಿದೆ. ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿಯನ್ನು ಜಾರಿಗೆ ತಂದಿದ್ದು, ಬೆಳೆಗಳಿಗೆ ಕನಿಷ್ಠ ಬೆಂಬಲ ಬೆಲೆಯನ್ನು ಹೆಚ್ಚಿಸಿದೆ ಎಂದು ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಖಾತೆ ರಾಜ್ಯ ಸಚಿವ ಭಗೀರಥ ಚೌಧರಿ ಹೇಳಿದ್ದಾರೆ.

ಪಂಜಾಬ್‌ನ ಶಂಭು ಮತ್ತು ಖಾನೌರಿ ಗಡಿಗಳಲ್ಲಿ ಪ್ರತಿಭಟನಾ ಸ್ಥಳದಿಂದ ರೈತರನ್ನು ಸ್ಥಳದಿಂದ ಸ್ಥಳಾಂತರಿಸಿದ ಪಂಜಾಬ್ ಸರ್ಕಾರದ ನಡೆಯನ್ನು ವಿರೋಧಿಸಿದ ಅವರು, ಆಡಳಿತರೂಢ ಆಮ್ ಆದ್ಮಿ ಪಕ್ಷ ಮತ್ತು ಕಾಂಗ್ರೆಸ್ ಪಕ್ಷವನ್ನು ಟೀಕಿಸಿದರು.

ಇದೇ ವೇಳೆ, ಪ್ರತಿಭಟನಾನಿರತ ರೈತರನ್ನು ಕೇಂದ್ರ ಸರ್ಕಾರ ಸ್ಥಳಾಂತರಿಸಿದೆ ಎಂಬ ಪ್ರತಿಪಕ್ಷಗಳ ಆರೋಪವನ್ನು ಸಚಿವರು ತಳ್ಳಿಹಾಕಿದರು.

ಇದಕ್ಕೂ ಮುನ್ನ, ರೈತರಿಗೆ ನ್ಯಾಯ ಒದಗಿಸಬೇಕೆಂದು ಒತ್ತಾಯಿಸಿ ಕಾಂಗ್ರೆಸ್ ಸಂಸದರು ಸಂಸತ್ತಿನ ಆವರಣದಲ್ಲಿ ಪ್ರತಿಭಟನೆ ನಡೆಸಿದರು. ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಕೂಡ ಪ್ರತಿಭಟನೆಯಲ್ಲಿ ಭಾಗಿಯಾಗಿದ್ದರು.

*****************

ಛತ್ತೀಸ್‌ಗಢದಲ್ಲಿ ಇಂದು ನಡೆದ ಎರಡು ಪ್ರತ್ಯೇಕ ಘಟನೆಗಳಲ್ಲಿ 30 ಮಾವೋವಾದಿಗಳು ಹತರಾಗಿದ್ದಾರೆ.

ಮಾವೋವಾದಿಗಳೊಂದಿಗಿನ ಗುಂಡಿನ ಚಕಮಕಿಯಲ್ಲಿ ಜಿಲ್ಲಾ ಮೀಸಲು ಪಡೆ– ಡಿಆರ್‌ಜಿಯ ಒಬ್ಬ ಯೋಧರೊಬ್ಬರು ಹುತಾತ್ಮರಾಗಿದ್ದಾರೆ.

ಛತ್ತೀಸ್‌ಗಢದ ಬಿಜಾಪುರ ಜಿಲ್ಲೆಯ ಬಸ್ತಾರ್ ವಿಭಾಗದ ಬಿಜಾಪುರ ಮತ್ತು ದಂತೇವಾಡ ಜಿಲ್ಲೆಯ ಗಡಿ ಪ್ರದೇಶದ ಅರಣ್ಯದಲ್ಲಿ ಮಾವೋವಾದಿಗಳು ಇದ್ದಾರೆ ಎಂಬ ಗುಪ್ತಚರ ಮಾಹಿತಿ ಹಿನ್ನೆಲೆಯಲ್ಲಿ, ಭದ್ರತಾ ಪಡೆಗಳ ಜಂಟಿ ತಂಡವು ಶೋಧ ಕಾರ್ಯಾಚರಣೆ ಆರಂಭಿಸಿತು. ಇಂದು ಬೆಳಗ್ಗೆಯಿಂದ, ಗಂಗಲೂರು ಪ್ರದೇಶದಲ್ಲಿ ಭದ್ರತಾ ಪಡೆಗಳು ಮತ್ತು ಮಾವೋವಾದಿಗಳ ನಡುವೆ ಗುಂಡಿನ ಚಕಮಕಿ ನಡೆದಿದೆ.

ಇಲ್ಲಿಯವರೆಗೆ, 26 ಮಾವೋವಾದಿಗಳ ಮೃತದೇಹಗಳನ್ನು ವಶಪಡಿಸಿಕೊಳ್ಳಲಾಗಿದೆ. ಜೊತೆಗೆ ಶಸ್ತ್ರಾಸ್ತ್ರಗಳು ಮತ್ತು ಸ್ಫೋಟಕ ವಸ್ತುಗಳನ್ನು ಸಹ ವಶಪಡಿಸಿಕೊಳ್ಳಲಾಗಿದೆ. ಪ್ರದೇಶದಲ್ಲಿ ಶೋಧ ಕಾರ್ಯಾಚರಣೆ ಮುಂದುವರಿದಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಛತ್ತೀಸ್‌ಗಢದ ಕಾಂಕೇರ್ ಜಿಲ್ಲೆಯಲ್ಲಿ ನಡೆದ ಮತ್ತೊಂದು ಕಾರ್ಯಾಚರಣೆಯಲ್ಲಿ, ಭದ್ರತಾ ಪಡೆಗಳು ಮತ್ತು ಮಾವೋವಾದಿಗಳ ನಡುವಿನ ಗುಂಡಿನ ಚಕಮಕಿಯಲ್ಲಿ ನಾಲ್ವರು ಮಾವೋವಾದಿಗಳು ಹತರಾಗಿದ್ದಾರೆ.

ಕಾರ್ಯಾಚರಣೆ ಕುರಿತು ಪ್ರತಿಕ್ರಿಯಿಸಿದ ಕೇಂದ್ರ ಗೃಹ ಸಚಿವ ಅಮಿತ್ ಶಾ, ನಕ್ಸಲ್ ಮುಕ್ತ ಭಾರತ ಅಭಿಯಾನ ನಿಟ್ಟಿನಲ್ಲಿ ದೇಶದ ಸೈನಿಕರು ಮತ್ತೊಂದು ದೊಡ್ಡ ಯಶಸ್ಸನ್ನು ಸಾಧಿಸಿದ್ದಾರೆ. ಮುಂದಿನ ವರ್ಷ ಮಾರ್ಚ್ 31ರೊಳಗೆ ದೇಶವು ನಕ್ಸಲ್ ಮುಕ್ತವಾಗಲಿದೆ ಎಂದು ಭರವಸೆ ವ್ಯಕ್ತಪಡಿಸಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ ನಕ್ಸಲರ ವಿರುದ್ಧ ಕಠಿಣ ಧೋರಣೆಯನ್ನು ಅನುಸರಿಸುತ್ತಿದೆ. ಎಲ್ಲಾ ಸೌಲಭ್ಯಗಳನ್ನು ನೀಡುತ್ತಿದ್ದರೂ ಶರಣಾಗದ ನಕ್ಸಲೀಯರ ವಿರುದ್ಧ ಸರ್ಕಾರ ಶೂನ್ಯ ಸಹಿಷ್ಣತೆಯನ್ನು ಹೊಂದಿದೆ ಎಂದು ಸಚಿವ ಅಮಿತ್ ಶಾ ಹೇಳಿದ್ದಾರೆ.

*****************

ಭಾರತ ಸೇವಾ ವಲಯದಲ್ಲಿ ಶ್ರೇಷ್ಠವಾಗಿದ್ದು, ಈಗ ಅದು ಉತ್ಪನ್ನ ರಾಷ್ಟ್ರವಾಗಲು ಶ್ರಮಿಸಬೇಕು ಎಂದು ಕೇಂದ್ರ ಎಲೆಕ್ಟ್ರಾನಿಕ್ಸ್ ಹಾಗೂ ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ಅಭಿಪ್ರಾಯಪಟ್ಟಿದ್ದಾರೆ.

ನವದೆಹಲಿಯಲ್ಲಿ ಇಂದು ನಡೆದ ಇಂಡಿಯನ್ ವೆಬ್ ಬ್ರೌಸರ್ ಡೆವಲಪ್‌ಮೆಂಟ್ ಚಾಲೆಂಜ್ ಮತ್ತು ಚಿಪ್ಸ್ ಟು ಸ್ಟಾರ್ಟ್‌ಅಪ್ ಪ್ರೋಗ್ರಾಂ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಅವರು ಮಾತನಾಡಿದರು.

ಇಂದು, ಶಿಕ್ಷಣ ಸಂಸ್ಥೆಗಳು, ಸ್ಟಾರ್ಟ್‌ಅಪ್‌ಗಳು, ವಿದ್ಯಾರ್ಥಿಗಳು ಮತ್ತು ಸಂಶೋಧಕರು ನಾವೀನ್ಯತೆಯನ್ನು ಹೆಚ್ಚಿಸಲು ಮತ್ತು ಹೊಸ ಪರಿಹಾರಗಳನ್ನು ರಚಿಸಲು ಒಟ್ಟಾಗಿ ಬರುತ್ತಿದ್ದಾರೆ. ಪರಿಹಾರಗಳು ಉದ್ಯಮದ ಎಲ್ಲಾ ಅಂಶಗಳಿಂದ ಬರಬೇಕು. ಎಲ್ಲಾ ಪ್ರತಿಭಾನ್ವಿತ ಜನರು ಒಟ್ಟಾಗಿ ಕೈಜೋಡಿಸಿ, ಪರಿಹಾರಗಳನ್ನು ಒದಗಿಸಬೇಕು ಎಂದು ಸಚಿವ ಅಶ್ವಿನಿ ವೈಷ್ಣವ್ ಸಲಹೆ ನೀಡಿದರು.

******************

ಪ್ರಧಾನಿ ನರೇಂದ್ರ ಮೋದಿ ಅವರ ಅಧ್ಯಕ್ಷತೆಯಲ್ಲಿ ನಡೆದ ಭದ್ರತೆ ಕುರಿತ ಸಚಿವ ಸಂಪುಟ ಸಭೆಯಲ್ಲಿ ಸುಮಾರು 7 ಸಾವಿರ ಕೋಟಿ ರೂಪಾಯಿ ಮೌಲ್ಯದ ದೇಶಿ ನಿರ್ಮಿತ ಅಡ್ವಾನ್ಸ್ಡ್ ಟೋವ್ಡ್ ಆರ್ಟಿಲರಿ ಗನ್ ಸಿಸ್ಟಮ್–ಎಟಿಎಜಿಎಸ್ ಸ್ವಾಧೀನಕ್ಕೆ ಅನುಮೋದನೆ ನೀಡಲಾಗಿದೆ. ಇದು ರಕ್ಷಣಾ ವಲಯದಲ್ಲಿ ದೇಶದ ಸ್ವಾವಲಂಬನೆಯತ್ತ ಪ್ರಮುಖ ಹೆಜ್ಜೆಯಾಗಿದೆ.

ಎಟಿಎಜಿಎಸ್ ಸ್ಥಳೀಯವಾಗಿ ವಿನ್ಯಾಸಗೊಳಿಸಿದ, ಅಭಿವೃದ್ಧಿಪಡಿಸಿದ ಮತ್ತು ತಯಾರಿಸಿದ 155 ಎಂಎಂ ಆರ್ಟಿಲರಿ ಗನ್ ಆಗಿದೆ. ತನ್ನ ಅತ್ಯಾಧುನಿಕ ತಂತ್ರಜ್ಞಾನ ಮತ್ತು ಉನ್ನತ ಸಾಮರ್ಥ್ಯದೊಂದಿಗೆ ಭಾರತೀಯ ಸಶಸ್ತ್ರಪಡೆಗಳ ಕಾರ್ಯಾಚರಣೆಯನ್ನು ಮತ್ತಷ್ಟು ಬಲಿಷ್ಠಗೊಳಿಸಲು ಸಜ್ಜಾಗಿದೆ ಎಂದು ಐಎಎನ್‌ಎಸ್ ಸುದ್ದಿ ಸಂಸ್ಥೆ ವರದಿ ಮಾಡಿದೆ.

******************

ಟಿ–90 ಟ್ಯಾಂಕ್‌ಗಳಿಗಾಗಿ ಒಂದು ಸಾವಿರದ 350 ಎಚ್‌ಪಿ ಎಂಜಿನ್‌ಗಳು, ವರುಣಾಸ್ತ್ರ ಟಾರ್ಪಿಡೊ ಹಾಗೂ ವಾಯುಗಾಮಿ ಆರಂಭಿಕ ಎಚ್ಚರಿಕೆ ಮತ್ತು ನಿಯಂತ್ರಣ ವಿಮಾನ ವ್ಯವಸ್ಥೆ ಖರೀದಿಗೆ ಕೇಂದ್ರ ಸರ್ಕಾರ ಅನುಮೋದನೆ ನೀಡಿದೆ.

ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರ ಅಧ್ಯಕ್ಷತೆಯಲ್ಲಿ ಇಂದು ನಡೆದ ರಕ್ಷಣಾ ಸ್ವಾಧೀನ ಮಂಡಳಿ ಸಭೆಯಲ್ಲಿ ಈ ಅನುಮೋದನೆಯನ್ನು ನೀಡಲಾಯಿತು. ಈ ಖರೀದಿಗೆ 54 ಸಾವಿರ ಕೋಟಿ ರೂಪಾಯಿ ವೆಚ್ಚವಾಗಲಿದೆ.

******************

ಉತ್ತರಾಖಂಡದಲ್ಲಿ ನಡೆಯುವ ಚಾರ್ ಧಾಮ್ ಯಾತ್ರೆಗೆ ಇಂದು ನೋಂದಣಿ ಆರಂಭವಾಗಿದೆ. ಈ ವರ್ಷ, ನೋಂದಣಿಗೆ ಆಧಾರ್ ದೃಢೀಕರಿಸಲಾಗುತ್ತದೆ. ಭಕ್ತರು ನೋಂದಣಿ ಸಮಯದಲ್ಲಿ ತಮ್ಮ ಆಧಾರ್ ಕಾರ್ಡ್ ವಿವರಗಳನ್ನು ಒದಗಿಸಬೇಕಾಗುತ್ತದೆ ಎಂದು ಉತ್ತರಾಖಂಡ ಪ್ರವಾಸೋದ್ಯಮ ಇಲಾಖೆಯ ಅಧಿಕಾರಿಗಳು ತಿಳಿಸಿದ್ದಾರೆ.

ಒಟ್ಟು ನೋಂದಣಿಗಳಲ್ಲಿ, ಶೇಕಡಾ 60 ರಷ್ಟು ಆನ್‌ಲೈನ್‌ನಲ್ಲಿ ನಡೆಸಲಾಗುವುದು. ಉಳಿದ ಶೇಕಡಾ 40 ರಷ್ಟು ಆಫ್‌ಲೈನ್‌ನಲ್ಲಿರುತ್ತದೆ. ಈ ಪ್ರಕ್ರಿಯೆಯನ್ನು ಸುಗಮಗೊಳಿಸಲು, ಹರಿದ್ವಾರ, ಋಷಿಕೇಶ ಸೇರಿದಂತೆ ಪ್ರಯಾಣ ಮಾರ್ಗಗಳಲ್ಲಿ ನೋಂದಣಿ ಕೇಂದ್ರಗಳ ಸಂಖ್ಯೆಯನ್ನು ಹೆಚ್ಚಿಸಲಾಗುವುದು ಎಂದು ಮಾಹಿತಿ ನೀಡಿದ್ದಾರೆ.

ಯಾತ್ರಿಕರು registration and touristcare.uk.gov.in ನಲ್ಲಿ ಆನ್‌ಲೈನ್‌ನಲ್ಲಿ ನೋಂದಾಯಿಸಿಕೊಳ್ಳಬಹುದು. ಭಕ್ತರ ಅನುಕೂಲವನ್ನು ಹೆಚ್ಚಿಸಲು, ಪ್ರವಾಸೋದ್ಯಮ ಇಲಾಖೆಯು ಈ ವರ್ಷ ಪ್ರಯಾಣಕ್ಕೆ 40 ದಿನಗಳ ಮುಂಚಿತವಾಗಿ ಆನ್‌ಲೈನ್ ನೋಂದಣಿ ಪ್ರಕ್ರಿಯೆಯನ್ನು ಪ್ರಾರಂಭಿಸಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

******************

ನವದೆಹಲಿಯ ಇಂದಿರಾಗಾಂಧಿ ಕ್ರೀಡಾಂಗಣದಲ್ಲಿಂದು ಖೇಲೋ ಇಂಡಿಯಾ ಪ್ಯಾರಾ ಕ್ರೀಡಾಕೂಟದ ಎರಡನೇ ಆವೃತ್ತಿಯನ್ನು ಕೇಂದ್ರ ಯುವಜನ ವ್ಯವಹಾರ ಮತ್ತು ಕ್ರೀಡಾ ಸಚಿವ ಡಾ.ಮನ್ಸುಖ್ ಮಾಡವೀಯ ಉದ್ಘಾಸಿದರು.

ಇದೇ 27ರವರೆಗೆ ನಡೆಯಲಿರುವ ಕ್ರೀಡಾಕೂಟದಲ್ಲಿ 1 ಸಾವಿರದ 300ಕ್ಕೂ ಅಧಿಕ ಕ್ರೀಡಾಪಟುಗಳು ಭಾಗವಹಿಸಿದ್ದಾರೆ.

ತಳಮಟ್ಟದಲ್ಲಿ ಕ್ರೀಡೆಯನ್ನು ಉತ್ತೇಜಿಸುವ ಉಪಕ್ರಮದ ಭಾಗವಾಗಿ ಕೇಂದ್ರ ಸರ್ಕಾರ ಈ ಕ್ರೀಡಾಕೂಟವನ್ನು ಆಯೋಜಿಸಿದೆ.

ಜವಹರಲಾಲ್ ನೆಹರು ಕ್ರೀಡಾಂಗಣ, ಇಂದಿರಾಗಾಂಧಿ ಕ್ರೀಡಾಂಗಣ ಮತ್ತು ಡಾ. ಕರ್ಣಿಸಿಂಗ್ ಶೂಟಿಂಗ್ ರೇಂಜ್‌ನಲ್ಲಿ ಕ್ರೀಡಾಕೂಟ ನಡೆಯಲಿದೆ. ಪ್ಯಾರಾ ಆರ್ಚರಿ, ಪ್ಯಾರಾ ಅಥ್ಲೆಟಿಕ್ಸ್, ಪ್ಯಾರಾ ಬ್ಯಾಡ್ಮಿಂಟನ್, ಪ್ಯಾರಾ ಶೂಟಿಂಗ್, ಪ್ಯಾರಾ ಟೇಬಲ್ ಟೆನಿಸ್ ಮತ್ತು ಪ್ಯಾರಾ ಪವರ್ ಲಿಫ್ಟಿಂಗ್ ಕ್ರೀಡೆಗಳು ನಡೆಯಲಿವೆ.

*********ಮುಕ್ತಾಯ********